ಪೊಲೀಸ್ ಮಹಾ ನಿರ್ದೇಶಕರು ಹಾಗೂ
ಮಹಾ ನಿರ್ದೇಶಕರು
ಕರ್ನಾಟಕ ಅಗ್ನಿಶಾಮಕ ಮತ್ತು
ತುರ್ತು ಸೇವೆಗಳು ಹಾಗೂ ರಾಜ್ಯ ವಿಪತ್ತು
ನಿರ್ವಹಣಾ ಪಡೆಯ ನಿರ್ದೇಶನಾಲಯ
ನಂ.1, ಅಣ್ಣಾಸ್ವಾಮಿ ಮೊದಲಿಯಾರ್ ರಸ್ತೆ
ಬೆಂಗಳೂರು–560 042

ದೂರವಾಣಿ : 25570733
22971501
ಫ್ಯಾಕ್ಸ್ : 22971512

ಸಂಖ್ಯೆ:ಜಿಬಿಸಿ(2)273/2022-23
E-Office File No.1654/2025
E-Office Com No.71780.

ದಿನಾಂಕ:05-08-2025

ಗೆ,

ಪ್ರಾಂಶುಪಾಲರು,
ಮೆ|| ನ್ಯಾಷನಲ್ ಪಬ್ಲಿಕ್ ಸ್ಕೂಲ್-ಜಾಲಹಳ್ಳಿ
ಸರ್ವೇ ನಂ.61/2, 62/1, 62/28, 67/3, 67/88, 69,3,
ಸಿಂಗಾಪುರ ವಿಲೇಜ್,
ಬೆಂಗಳೂರು.

ಮಾನ್ಯರೆ,

ವಿಷಯ: ಬೆಂಗಳೂರು ನಗರದ ಸಿಂಗಾಪುರ ವಿಲೇಜ್, ಸರ್ವೇ ನಂ.61/2, 62/1, 62/28, 67/3, 67/88, 69,3 ಇಲ್ಲಿ ನಿರ್ಮಿಸಿರುವ ಮೆ|| ನ್ಯಾಷನಲ್ ಪಬ್ಲಿಕ್ ಸ್ಕೂಲ್-ಜಾಲಹಳ್ಳಿ ಕಟ್ಟಡಕ್ಕೆ ಸಮಾಪನ ಪತ್ರ ನೀಡುವ ಬಗ್ಗೆ.

ಉಲ್ಲೇಖ:1)ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆಯ ಅಗ್ನಿ ಸಲಹಾ ಪತ್ರ ಸಂ.ಜಿಬಿಸಿ(2)273/2022-23 ದಿನಾಂಕ:18-07-2024.
2)ನಿಮ್ಮ ಪತ್ರ ದಿನಾಂಕ:23-07-2025.

<<<<<<<>>>>>>>

ಬೆಂಗಳೂರು ನಗರದ ಸಿಂಗಾಪುರ ವಿಲೇಜ್, ಸರ್ವೇ ನಂ.61/2, 62/1, 62/28, 67/3, 67/88, 69,3 ಇಲ್ಲಿ ನಿರ್ಮಿಸಿರುವ 18.40 ಮೀಟರ್ ಎತ್ತರದ ತಳಹಂತ, ನೆಲಹಂತ ಮತ್ತು 04 ಮೇಲಂತಸ್ತುಗಳನ್ನು ಹೊಂದಿರುವ ಮೆ|| ನ್ಯಾಷನಲ್ ಪಬ್ಲಿಕ್ ಸ್ಕೂಲ್-ಜಾಲಹಳ್ಳಿ ಕಟ್ಟಡಕ್ಕೆ ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆಯಿಂದ ದಿನಾಂಕ:18-07-2024 ರಂದು ನಿಮ್ಮ ಕೋರಿಕೆಯಂತೆ ಅಗ್ನಿ ಸಲಹಾ ಪತ್ರ ನೀಡಲಾಗಿದೆ.

ಉಲ್ಲೇಖ (2) ರ ನಿಮ್ಮ ಪತ್ರದಲ್ಲಿ, ಸದರಿ ಶೈಕ್ಷಣಿಕ ಕಟ್ಟಡದಲ್ಲಿ ಅಗ್ನಿಶಮನ ಉಪಕರಣಗಳ ಅಳವಡಿಕೆ ಕಾರ್ಯ ಮುಗಿದಿದ್ದು, ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆಯ ಸಮಾಪನ ಪತ್ರ ನೀಡುವಂತೆ ಕೋರಿರುವಿರಿ.

ನಿಮ್ಮ ಕೋರಿಕೆಯಂತೆ, ಜಿಲ್ಲಾ ಅಗ್ನಿಶಾಮಕ ಅಧಿಕಾರಿ, ಬಾಗಲೂರು ಕ್ರಾಸ್, ಅಗ್ನಿಶಾಮಕ ಠಾಣೆ, ಕರ್ನಾಟಕ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ರವರು ದಿನಾಂಕ: 04-08-2025 ರಂದು ಬೆಂಗಳೂರು ನಗರದ ಸಿಂಗಾಪುರ ವಿಲೇಜ್, ಸರ್ವೇ ನಂ.61/2, 62/1, 62/28, 67/3, 67/88, 69,3 ಇಲ್ಲಿ ನಿರ್ಮಿಸಿರುವ ಕಟ್ಟಡವನ್ನು ಪರಿವೀಕ್ಷಣೆ ಮಾಡಿ ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆಯು ನೀಡಿರುವ ಸಲಹಾ ಪತ್ರದಂತೆ, ಅಗ್ನಿರಕ್ಷಣೆ ಮತ್ತು ನಿಯಂತ್ರಣ, ಅಗ್ನಿನಂದಿಸುವ ಉಪಕರಣಗಳ ಅಳವಡಿಕೆ ಹಾಗೂ ರಕ್ಷಣಾ ಕ್ರಮಗಳನ್ನು ಶೈಕ್ಷಣಿಕ ಕಟ್ಟಡದಲ್ಲಿ ಪೂರ್ಣವಾಗಿ ಅನುಷ್ಠಾನಗೊಳಿಸಿರುವುದಾಗಿ ಹಾಗೂ ಸದರಿ ಕಟ್ಟಡದಲ್ಲಿನ ನೌಕರರು/ಸಿಬ್ಬಂದಿಗಳಿಗೆ ಅಗ್ನಿಶಮನ ಕುರಿತ ತರಬೇತಿ ಮಾತ್ರ ಬಾಕಿ ಇರುವುದಾಗಿ ಹಾಗೂ ಸದರಿ ಕಟ್ಟಡದ ಸಮಾಪನ ಪತ್ರ ತರುವಾಯ ಅದರಲ್ಲಿನ ಸಿಬ್ಬಂದಿಗಳಿಗೆ ಅಗ್ನಿಶಮನ ಕುರಿತ ತರಬೇತಿ ವ್ಯವಸ್ಥಿಸಲು ಸಾಧ್ಯವಾಗುತ್ತದೆಂದು ತಿಳಿಸಿರುತ್ತಾರೆ.

ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಕಛೇರಿ ಬೆಂಗಳೂರು 560042

5/8/25

Scanned with OKEN Scanner

ಆದ್ದರಿಂದ, ಬೆಂಗಳೂರು ನಗರದ ಸಿಂಗಾಪುರ ವಿಲೇಜ್, ಸರ್ವೇ ನಂ.61/2, 62/1, 62/28, 67/3, 67/88, 69,3 ಇಲ್ಲಿ ನಿರ್ಮಿಸಿರುವ 18.40 ಮೀಟರ್ ಎತ್ತರದ ತಳಹಂತ, ನೆಲಹಂತ ಮತ್ತು 04 ಮೇಲಂತಸ್ತುಗಳನ್ನು ಹೊಂದಿರುವ ಮೆ|| ನ್ಯಾಷನಲ್ ಪಬ್ಲಿಕ್ ಸ್ಕೂಲ್-ಜಾಲಹಳ್ಳಿ ಕಟ್ಟಡಕ್ಕೆ ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆಯ ಸಲಹಾ ಪತ್ರ ಸಂಖ್ಯೆ:ಜಿಬಿಸಿ(2)273/2022-23 ದಿನಾಂಕ:18-07-2024 ರಲ್ಲಿ ತಿಳಿಸಿರುವಂತೆ, ಅಗ್ನಿರಕ್ಷಣೆ ಮತ್ತು ನಿಯಂತ್ರಣ ಹಾಗೂ ಅಗ್ನಿನಂದಿಸುವ ಉಪಕರಣಗಳ ಅಳವಡಿಕೆ ಹಾಗೂ ರಕ್ಷಣಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕೆಂದು ಹಾಗೂ ನಿಮ್ಮ ದಿನಾಂಕ: 05-08-2025 ಮುಚ್ಚಳಿಕೆ ಪತ್ರದಲ್ಲಿ ಒಪ್ಪಿರುವಂತೆ, ಅಗ್ನಿಶಮನ ಉಪಕರಣಗಳನ್ನು ಸುಸ್ಥಿತಿಯಲ್ಲಿಡಬೇಕೆಂಬ ಹಾಗೂ ಕಟ್ಟಡದಲ್ಲಿನ ಶೇಕಡಾ 40% ರಷ್ಟು ಸಿಬ್ಬಂದಿ/ನೌಕರರಿಗೆ ಅಗ್ನಿರಕ್ಷಣೆ ಮತ್ತು ನಿಯಂತ್ರಣ ಕ್ರಮಗಳ ಬಗ್ಗೆ, ಬೆಂಗಳೂರಿನ ಆರ್.ಎ.ಮುಂಡ್ಕೂರ್ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಅಕಾಡಮಿಯಲ್ಲಿ ಸೂಕ್ತ ತರಬೇತಿಯನ್ನು 03 ತಿಂಗಳೊಳಗೆ ಪಡೆಯಲು ವ್ಯವಸ್ಥಿಸಬೇಕೆಂಬ ಷರತ್ತಿನ ಮೇಲೆ ಸಮಾಪನ ವರದಿ ಪ್ರಮಾಣ ಪತ್ರವನ್ನು ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆಯಿಂದ ನೀಡಲಾಗಿದೆ.

**ಈ ಸಮಾಪನ ಪ್ರಮಾಣ ಪತ್ರವು ಜಾರಿಯಾದ ದಿನಾಂಕದಿಂದ ಮುಂದಿನ ಎರಡು ವರ್ಷದವರೆಗೆ ಚಾಲ್ತಿಯಲ್ಲಿರುತ್ತದೆ. ತದನಂತರ ಈ ಸಮಾಪನ ಪ್ರಮಾಣ ಪತ್ರವನ್ನು ನವೀಕರಿಸುವಂತೆ ತಿಳಿಸಲಾಗಿದೆ.**

ಹಾಗೆಯೇ ಒಂದು ವೇಳೆ ಯಾವುದೇ ಸಂದರ್ಭದಲ್ಲಿ ಇಲಾಖೆಯ ಶಿಫಾರಸ್ಸಿನನ್ವಯ ಅಳವಡಿಸಿರುವ ಅಗ್ನಿನಿವಾರಣೆ ಹಾಗೂ ಅಗ್ನಿಶಮನ ಉಪಕರಣಗಳು ಸುಸ್ಥಿತಿಯಲ್ಲಿರದೇ ಇರುವುದು ಕಂಡು ಬಂದರೆ ಅಥವಾ ರಕ್ಷಣಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸದಿದ್ದರೆ ಅಥವಾ ಕಾನೂನಿನನ್ವಯ ಸದರಿ ಕಟ್ಟಡದ ಸುತ್ತ ಬಿಟ್ಟಿರುವ ತೆರೆದ ಪ್ರದೇಶದಲ್ಲಿ ಯಾವುದೇ ಹೆಚ್ಚುವರಿ ರಚನೆಗಳನ್ನು ನಿರ್ಮಾಣ ಮಾಡಿದರೆ, ಅಥವಾ ಯಾವುದೇ ರೀತಿಯ ಖಾಯಂ/ತಾತ್ಕಾಲಿಕ ಅಡಚಣೆಗಳನ್ನು ಉಂಟು ಮಾಡಿದರೆ, ಈ 'ಸಮಾಪನ ಪ್ರಮಾಣ ಪತ್ರವು ಅನೂರ್ಜಿತಗೊಳ್ಳುವುದು ಹಾಗೂ ಕಾನೂನಿನ ಚೌಕಟ್ಟಿನಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂಬುದಾಗಿ ಸೂಚಿಸಲಾಗಿದೆ.

**ಡಿ.ಜಿ.ಪಿ. ಮತ್ತು ಡಿ.ಜಿ.ರವರಿಂದ**
**ಕರಡು ಅನುಮೋದಿಸಲ್ಪಟ್ಟಿದೆ.**

ಕರ್ನಾಟಕ ರಾಜ್ಯ
ಅಗ್ನಿಶಾಮಕ
ಮತ್ತು ತುರ್ತು
ಸೇವೆಗಳ ಕಚೇರಿ
ಬೆಂಗಳೂರು
560042

ತಮ್ಮ ವಿಶ್ವಾಸಿ,

5/8/25

(ಟಿ.ಎನ್.ಶಿವಶಂಕರ)
ನಿರ್ದೇಶಕರು
ಪೊಲೀಸ್ ಮಹಾ ನಿರ್ದೇಶಕರು
ಹಾಗೂ ಮಹಾ ನಿರ್ದೇಶಕರು
ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು
ರವರ ಪರವಾಗಿ

ಪ್ರತಿ:- ಜಿಲ್ಲಾ ಅಗ್ನಿಶಾಮಕ ಅಧಿಕಾರಿ, ಬಾಗಲೂರು ಕ್ರಾಸ್, ಅಗ್ನಿಶಾಮಕ ಠಾಣೆ.

Scanned with OKEN Scanner